ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ (RDPR)

# ಗ್ರಾಮ ಪಂಚಾಯತ್ ಕಾರ್ಯಾಲಯ ಯಡಮೊಗೆ

ಕುಂದಾಪುರ ತಾಲೂಕು, ಉಡುಪಿ ಜಿಲ್ಲೆ, 576282
ಫೋನ್ ನಂಬ್ರ : 08259-298129, ಇ.ಮೇಲ್ : yadamogge61@gmail.com

ಕ್ರಮಾಂಕ/ಗ್ರಾ.ಪಂ.ಯ/2020-21 ದಿನಾಂಕ :13.05.2020

ಗೆ,

ಶ್ರೀ ಬಿ. ಎಸ್. ಯಡಿಯೂರಪ್ಪ
ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು

**ವಿಷಯ: ಗ್ರಾಮ ಪಂಚಾಯತ್‌ಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿ ಇರುವ ಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆ ಒತ್ತಾಯಿಸಿ ಪತ್ರ**

ಇಡೀ ದೇಶಾದ್ಯಂತ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್ – 19ರ ಪರಿಣಾಮ ಕರ್ನಾಟಕದ ಮೇಲೂ ಆಗಿರುವುದರಿಂದ ರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧ ರೀತಿಯ ಬದಲಾವಣೆಗಳಾಗಿವೆ. ಇದರ ಪರಿಣಾಮ, ಕರ್ನಾಟಕದಲ್ಲಿ, ಇದೇ ಮೇ ತಿಂಗಳ ಅಂತ್ಯದೊಳಗೆ ನಡೆಯಬೇಕಿದ್ದ ಗ್ರಾಮ ಪಂಚಾಯತ್ ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವಿಡ್-19ರ ಸಂಕಷ್ಟದ ಸಮಯದಲ್ಲಿ ಚುನಾವಣೆಯಂತಹ ಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇ ಸರಿ. ಈ ಹಿನ್ನಲೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಹೇಳಿರುವಂತೆ ಸುಮಾರು 6 ತಿಂಗಳುಗಳ ಕಾಲ ಚುನಾವಣೆ ಮುಂದೂಡಬೇಕಾಗಿರುವುದು ಅನಿವಾರ್ಯವಾಗಿದೆ. **ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರ್‍ಯಾವುದೋ ಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿ ಅವಕಾಶವಿದ್ದರೂ ಈ ವಿಕೋಪದ ಪರಿಸ್ಥಿತಿ ಇರುವಾಗ ಸೂಕ್ತವಾದುದಲ್ಲ.**

ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸರ್ಕಾರದ ರಥದ ಎರಡು ಗಾಲಿಗಳಿದ್ದಂತೆ. ಸರ್ಕಾರದ ರಥ ಮುನ್ನಡೆಸುವಲ್ಲಿ ಇಬ್ಬರ ಪಾತ್ರವೂ ಬಹಳ ಪ್ರಮುಖವಾದುದ್ದು, ಗ್ರಾಮ ಪಂಚಾಯತ್ ಒಂದು ಸ್ಥಳೀಯ ಸ್ವಯಂ ಸರ್ಕಾರ. **ಹೀಗಾಗಿಯೇ ಇಡೀ ರಾಜ್ಯದಾದ್ಯಂತ ಕೋವಿಡ್-19ರ ಪರಿಸ್ಥಿತಿ ಘೋಷಣೆಯ ಆದಾಗ ಮೊಟ್ಟಮೊದಲು ಸರ್ಕಾರ ಮಾಡಿದ ಕೆಲಸವೆಂದರೆ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳ, ಸ್ವಯಂಸೇವಾ ಸಂಸ್ಥೆಗಳ, ಸ್ವಯಂಸೇವಕರ ಸಂಯೋಜನೆಯಲ್ಲಿ ಜಾರಿ ಪಡೆ (ಕಾರ್ಯಪಡೆ) ರೂಪಿಸಿ ಇಡೀ ಪಂಚಾಯತ್‌ನ** ವಿಕೋಪ ನಿರ್ವಹಣೆಯ ಜವಾಬ್ದಾರಿಯ ನೇತೃತ್ವವನ್ನು ಗ್ರಾಮ ಸರ್ಕಾರಕ್ಕೆ ನೀಡಿದ್ದು. ಚುನಾಯಿತ ಪ್ರತಿನಿಧಿಗಳಾದ ನಾವು ಪಂಚಾಯತ್ ಆಡಳಿತದಲ್ಲಿ ಸಕ್ರೀಯವಾಗಿ ಭಾಗವಹಿಸಿ ಅನುಭವ ಪಡೆದು ಗ್ರಾಮ ಪಂಚಾಯತ್ ಅಭಿವೃದ್ಧಿಯಲ್ಲಿ ನಮ್ಮ ಪಾತ್ರ-ಜವಾಬ್ದಾರಿಗಳ ಮಹತ್ವವನ್ನು ಆಳವಾಗಿ ಅರ್ಥೈಸಿಕೊಂಡಿದ್ದರಿಂದ ವಿಕೋಪದ ಪರಿಸ್ಥಿತಿಯನ್ನೂ ಸಹ ನಿಭಾಯಿಸಲು ಸ್ಥಳೀಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು, ಇಲ್ಲಿನ ಪರಿಸ್ಥಿತಿ ಹೇಗಿದೆ, ಆಗಬೇಕಾದ ಪ್ರಮುಖ ಕಾರ್ಯಗಳೇನು, ಮುಂದಿರುವ ಸವಾಲುಗಳೇನು ಎಂಬುದನ್ನು ಕೂಲಂಕುಷವಾಗಿ ಗಮನಿಸಿದ್ದೇವೆ.

ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯಂತೆ ಇರುವ ಈ ಸಮಯದಲ್ಲಿ ನಾವು ಸ್ಥಳೀಯ ಸರ್ಕಾರದ ಅವಿಭಾಜ್ಯ ಅಂಗವಾಗಿ, ವಿಕೋಪವನ್ನು ಸಮರ್ಥವಾಗಿ ನಿಭಾಯಿಸುವಲ್ಲಿ, ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಉತ್ತರದಾಯಿಯಾಗಿ ಕಾರ್ಯನಿರ್ವಹಿಸಿರುತ್ತೇವೆ. ಚುನಾಯಿತ ವರ್ಗ ಹಾಗೂ ಅಧಿಕಾರಿ ವರ್ಗ ಒಗ್ಗೂಡಿ ಆಡಳಿತ ನಡೆಸಿರುವುದೇ ಈ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಪ್ರಮುಖ ಕಾರಣ. ಈ ವಿಕೋಪದ ಪರಿಸ್ಥಿತಿ ಇನ್ನೂ ಮುಂದುವರಿಯುತ್ತಿರುವ **ಈ ಸವಾಲಿನ ಸಮಯದಲ್ಲಿ, ಪಂಚಾಯತ್ ಆಡಳಿತಕ್ಕೆ ಕೇವಲ ಆಡಳಿತಾಧಿಕಾರಿಯ ಅಥವಾ ಉಸ್ತುವಾರಿ ಸಮಿತಿಯ ನೇಮಕ** ಅಸಮಂಜಸವಾದುದು. **ತಮ್ಮ ಸರ್ಕಾರದ ಈ ಆಲೋಚನೆ, ನಿರ್ಧಾರವನ್ನು ತಕ್ಷಣವೇ ಕೈಬಿಟ್ಟು, ಪ್ರಸ್ತುತ ಇರುವ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ಥಳೀಯ ಸರ್ಕಾರವನ್ನೇ ಮಧ್ಯಂತರ ಸ್ಥಳೀಯ ಸ್ವಯಂ ಸರ್ಕಾರವಾಗಿ ಮುಂದುವರಿಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ನಮ್ಮ ಪಂಚಾಯತ್‌ನ ಸಾಮಾನ್ಯ ಸಭೆಯ ನಿರ್ಣಯವನ್ನು ಮಂಡಿಸುತ್ತಿದ್ದೇವೆ.** ಇದೇ ಪಂಚಾಯತ್‌ನ ಜನರಿಂದ ಚುನಾಯಿತರಾದ ನಾವು ಸ್ಥಳೀಯ ಸರ್ಕಾರದ ಭಾಗವಾಗಿ ನಮ್ಮ ಗ್ರಾಮದ ಜನರಿಗೆ, ಗ್ರಾಮದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ.

ಇತಿ,

ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು
ಯಡಮೊಗೆ ಗ್ರಾಮ ಪಂಚಾಯತ್, ಕುಂದಾಪುರ ತಾಲೂಕು, ಉಡುಪಿ ಜಿಲ್ಲೆ

**ಯಥಾ ಪ್ರತಿ:**

- ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ
- ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
- ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ
- ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ, ಕರ್ನಾಟಕ

ಅಧ್ಯಕ್ಷರು
ಗ್ರಾಮ ಪಂಚಾಯತ್, ಯಡಮೊಗೆ
ಕುಂದಾಪುರ ತಾಲೂಕು

Scanned with CamS

## ಯಡಮೊಗೆ ಗ್ರಾಮ ಪಂಚಾಯತ್, ಕುಂದಾಪುರ ತಾಲೂಕು, ಉಡುಪಿ ಜಿಲ್ಲೆ

| ಕ್ರ.ಸಂ | ಹೆಸರು | ಪದನಾಮ | ಸಹಿ |
|---|---|---|---|
| 1 | ಶ್ರೀಮತಿ ಸಣ್ಣಮ್ಮ ನಾಯ್ಕ | ಅಧ್ಯಕ್ಷರು | |
| 2 | ಶ್ರೀ ಬಾಲಚಂದ್ರ ಕುಲಾಲ | ಉಪಾಧ್ಯಕ್ಷರು | |
| 3 | ಶ್ರೀ ಗುಂಡು ಶೆಟ್ಟಿ | ಸದಸ್ಯರು | |
| 4 | ಶ್ರೀ ಮತಿ ಸಾಧು ಬೋವಿ | ಸದಸ್ಯರು | |
| 5 | ಶ್ರೀ ನಾಗಭೂಷಣ ನಾಯ್ಕ | ಸದಸ್ಯರು | |
| 6 | ಶ್ರೀಮತಿ ಜಯಲಕ್ಷ್ಮೀ ಆಚಾರ್ತಿ | ಸದಸ್ಯರು | |

ಅಧ್ಯಕ್ಷರು
ಗ್ರಾಮ ಪಂಚಾಯತ್, ಯಡಮೊಗೆ
ಕುಂದಾಪುರ ತಾಲೂಕು